ಪ್ರಜಾವಾಣಿ

21.10.2015

## ಅಮೆರಿಕ ರಾಜತಾಂತ್ರಿಕ ಅಧಿಕಾರಿ ಸಿಂಡ್ಲೆರ್ ಶ್ಲಾಘನೆ

# ಆನ್‌ಲೈನ್ ಕೃಷಿ ಮಾರಾಟ ವ್ಯವಸ್ಥೆ ರೈತಪರ

ಪ್ರಜಾವಾಣಿ ವಾರ್ತೆ



ಅಮೆರಿಕದ ರಾಯಭಾರ ಕಚೇರಿಯಲ್ಲಿನ ಕೃಷಿಗೆ ಸಂಬಂಧಿಸಿದ ರಾಜತಾಂತ್ರಿಕ ಅಧಿಕಾರಿ ಸ್ಕಾಟ್ ಸಿಂಡ್ಲರ್ ಅವರನ್ನು ತೋಟಗಾರಿಕಾ ಸಚಿವ ಶಾಮನೂರು ಶಿವಶಂಕರಪ್ಪ ಅವರು ಸ್ವಾಗತಿಸಿದರು. ಸಹಕಾರ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಆರ್. ಮನೋಜ್ ಮತ್ತು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್ ಚಿತ್ರದಲ್ಲಿದ್ದಾರೆ

ಬೆಂಗಳೂರು: 'ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಜಾರಿಗೆ ತಂದಿರುವ ಆನ್‌ಲೈನ್ ಮಾರಾಟ ವ್ಯವಸ್ಥೆ ರೈತ ಪರವಾಗಿದೆ' ಎಂದು ಅಮೆರಿಕ ರಾಯಭಾರ ಕಚೇರಿಯಲ್ಲಿನ ಕೃಷಿಗೆ ಸಂಬಂಧಿಸಿದ ರಾಜತಾಂತ್ರಿಕ ಅಧಿಕಾರಿ ಸ್ಕಾಟ್ ಸಿಂಡ್ಲೆರ್ ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಸೋಮವಾರ ತೋಟಗಾರಿಕಾ ಸಚಿವ ಶಾಮನೂರು ಶಿವಶಂಕರಪ್ಪ ಮತ್ತು ಇಲಾಖಾ ಅಧಿಕಾರಿಗಳನ್ನು ಭೇಟಿ ಮಾಡಿ, ರಾಜ್ಯ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ನೂತನವಾಗಿ ಜಾರಿಯಾಗಿರುವ ಆನ್‌ಲೈನ್ ಮಾರಾಟ ತಂತ್ರಜ್ಞಾನ ಕುರಿತು ಮಾಹಿತಿ ಪಡೆದರು.

ತೋಟಗಾರಿಕೆ ಮತ್ತು ಕೃಷಿ ಉತ್ಪನ್ನಗಳ ಮಾರಾಟ ಕ್ಷೇತ್ರದ ಉನ್ನತೀಕರಣಕ್ಕಾಗಿ, ವೈಜ್ಞಾನಿಕ ತಂತ್ರಜ್ಞಾನಗಳ ಅಳವಡಿಕೆಯ ದೃಷ್ಟಿಯಲ್ಲಿ ಅಮೆರಿಕ ಮತ್ತು ಕರ್ನಾಟಕದ ಸಂಬಂಧ ವೃದ್ಧಿಯಾಗಲಿದೆ ಎಂದು ಅವರು ತಿಳಿಸಿದರು.

ಕೃಷಿ ಉತ್ಪನ್ನಗಳ ಮಾರಾಟ ವ್ಯವಸ್ಥೆಯಲ್ಲಿ ಜಾರಿಗೆ ತಂದಿರುವ ಸುಧಾರಣೆ ಮತ್ತು ತಂತ್ರಾಂಶಗಳ ಕುರಿತು ಸಹಕಾರ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್ ಮತ್ತು ಹೆಚ್ಚುವರಿ ಕಾರ್ಯದರ್ಶಿ ಆರ್. ಮನೋಜ್ ಅವರು ಪ್ರಾತ್ಯಕ್ಷಿಕೆಯ ಮೂಲಕ ಮಾಹಿತಿ ನೀಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಆನ್‌ಲೈನ್ ಮೂಲಕ ಜಾರಿ ಮಾಡಲಾದ ಮಾರುಕಟ್ಟೆ ವ್ಯವಸ್ಥೆ, ವರ್ತಕರಿಗೆ ಏಕರೂಪದ ಏಕೀಕೃತ ಪರವಾನಗಿ ನೀಡಿಕೆ, ಕೃಷಿ ಉತ್ಪನ್ನಗಳ ಗುಣ ಪರೀಕ್ಷೆ ಮತ್ತು ವರ್ಗೀಕರಣದ ಬಗ್ಗೆ ಸ್ಕಾಟ್ ಸಿಂಡ್ಲರ್ ಮಾಹಿತಿ ಪಡೆದರು.